**All India Radio: Bangalore**
**Regional Bulletin In Kannada**
**31.01.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**31.01.2026 / 2.30 p.m.**
**<><><>**

ಮುಖ್ಯಾಂಶಗಳು

1. ಲೋಕಸಭೆಯಲ್ಲಿ ನಾಳೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಆಯವ್ಯಯ ಮಂಡನೆ - ಹಲವು ನಿರೀಕ್ಷೆಯಲ್ಲಿ ರಾಜ್ಯದ ಜನತೆ
2. ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯಿಂದ ಸರ್ಕಾರಕ್ಕೆ ಅಂತಿಮ ವರದಿ ಸಲ್ಲಿಕೆ
3. ಕೇಂದ್ರ ಪೊಲೀಸ್ ಮಹಾ ನಿರ್ದೇಶಕ ಹುದ್ದೆಗೆ ಎರಡು ವರ್ಷಗಳ ಕೇಂದ್ರ ಸೇವೆಯ ಅನುಭವ ಕಡ್ಡಾಯ - ರಾಜ್ಯ ಸರ್ಕಾರಕ್ಕೆ ಗೃಹಸಚಿವಾಲಯ ಪತ್ರ
4. ಮಂಗಳೂರಿನಲ್ಲಿ ಭಾರತೀಯ ವೈದ್ಯ ಪದ್ಧತಿಯ ಆಯುಷ್ ಹಬ್ಬಕ್ಕೆ ಚಾಲನೆ
5. ಮೈಸೂರಿನಲ್ಲಿ ಮಾದಕ ವಸ್ತುಗಳ ತಯಾರಿಕಾ ಘಟಕ ಪತ್ತೆ ; ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ

<><><>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನಾಳೆ ಲೋಕಸಭೆಯಲ್ಲಿ ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್ ಮಂಡಿಸಲಿದ್ದಾರೆ. ೨೦೧೯ ರಲ್ಲಿ ಅಧಿಕಾರವಹಿಸಿಕೊಂಡ ಬಳಿಕ ನಿರ್ಮಲಾ ಸೀತಾರಾಮನ್ ಅವರ ಸತತ ೯ನೇ ಆಯವ್ಯಯ ಮಂಡನೆ ಇದಾಗಿದೆ. ಸಂಸತ್ತಿನಲ್ಲಿ ಬಜೆಟ್ ಭಾಷಣ ಮುಗಿದ ಬಳಿಕ ಬಜೆಟ್ ದಾಖಲೆಗಳು ಮೊಬೈಲ್ ಅಪ್ಲಿಕೇಷನ್ ಹಾಗೂ ವೆಬ್‌ಸೈಟ್‌ನಲ್ಲಿ ಲಭ್ಯವಿದೆ. ಬಜೆಟ್ ಸಿದ್ಧತೆಗೂ ಮುನ್ನ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅರ್ಥ ಶಾಸ್ತ್ರಜ್ಞರು, ಕಾರ್ಮಿಕ ಸಂಘಗಳು, ಶಿಕ್ಷಣ ಮತ್ತು ಆರೋಗ್ಯ ವಲಯ, ಸಣ್ಣ ಮತ್ತು ಸೂಕ್ಷ್ಮ ಕೈಗಾರಿಕೆಗಳು, ಹಣಕಾಸು ವಲಯ ಹಾಗೂ ಬಂಡವಾಳ ಮಾರುಕಟ್ಟೆಗಳ ತಜ್ಞರು ಸೇರಿದಂತೆ ಹಲವಾರು ಪಾಲುದಾರರೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದ್ದಾರೆ. ಬಜೆಟ್ ತಯಾರಿಕೆ ಸಮಯದಲ್ಲಿ ವಿವಿಧ ವೇದಿಕೆಗಳ ಮೂಲಕ ಯುವಕರನ್ನು ಒಳಗೊಂಡಂತೆ ನಾಗರಿಕರಿಂದ ವಿವಿಧ ಸಲಹೆಗಳನ್ನು ಪಡೆಯಲಾಗಿದೆ.

<><><>

ಪ್ರಾದೇಶಿಕ ಅಸಮತೋಲನ ನಿವಾರಣೆ ಬಗ್ಗೆ ಸಮಿತಿ ಅಧ್ಯಕ್ಷ ಪ್ರೊಫೆಸರ್ ಎಂ.ಗೋವಿಂದ ರಾವ್ ಅವರು ಬೆಂಗಳೂರಿನಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಅಂತಿಮ ವರದಿ ಸಲ್ಲಿಸಿದರು. ಈ ವೇಳೆ ಸಚಿವ ಈಶ್ವರ್ ಖಂಡ್ರೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಲವು ಅಧಿಕಾರಿಗಳು ಉಪಸ್ಥಿತರಿದ್ದರು.

<><><>

ಕೇಂದ್ರ ಸರ್ಕಾರದಲ್ಲಿ ಪೊಲೀಸ್ ಮಹಾ ನಿರ್ದೇಶಕ ಹುದ್ದೆಗೆ ಅರ್ಹರಾಗಲು ಪೊಲೀಸ್ ವರಿಷ್ಠಾಧಿಕಾರಿ ಮತ್ತು ಉಪಮಹಾನಿರ್ದೇಶಕ ಹುದ್ದೆಯಲ್ಲಿರುವ ಭಾರತೀಯ ಪೊಲೀಸ್ ಸೇವೆಯ ಅಧಿಕಾರಿಗಳಿಗೆ ಎರಡು ವರ್ಷಗಳ ಕೇಂದ್ರ ಸೇವೆಯ ಅನುಭವವನ್ನು ಕಡ್ಡಾಯಗೊಳಿಸಲಾಗಿದೆ. ಈ ಸಂಬಂಧ ಕೇಂದ್ರ ಗೃಹ ಸಚಿವಾಲಯ ರಾಜ್ಯ ಸರ್ಕಾರದ ಎಲ್ಲ ಮುಖ್ಯಕಾರ್ಯದರ್ಶಿಗಳಿಗೆ ಪತ್ರ ಬರೆದಿದೆ. ಈ ನಿರ್ದೇಶನವು ೨೦೧೧ರ ಬ್ಯಾಚ್‌ನಿಂದ ಐಪಿಎಸ್ ಅಧಿಕಾರಿಗಳಿಗೆ ಅನ್ವಯಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ.

<><><>

ಭಾರತೀಯ ವೈದ್ಯಪದ್ಧತಿಗೆ ಜಗತ್ತಿನೆಲ್ಲೆಡೆ ಹೆಚ್ಚು ಬೇಡಿಕೆ ಇದ್ದು, ಈ ವೈದ್ಯ ಪದ್ಧತಿ ಇನ್ನಷ್ಟು ಬೆಳೆಯಬೇಕು ಎಂದು ಮಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಡಿ.ವೇದವ್ಯಾಸ ಕಾಮತ್ ತಿಳಿಸಿದ್ದಾರೆ. ಮಂಗಳೂರಿನಲ್ಲಿ ಭಾರತೀಯ ವೈದ್ಯ ಪದ್ಧತಿಗಳ ಮಹಾ ಸಂಭ್ರಮ 'ಆಯುಷ್ ಹಬ್ಬ' ಕ್ಕೆ ಇಂದು ಚಾಲನೆ ನೀಡಿ ಮಾತನಾಡಿದ ಅವರು, ಆಯುರ್ವೇದ ಕ್ಷೇತ್ರಕ್ಕೆ ಸೇವಾ ಮನೋಭಾವದಿಂದ ಬರುವವರ ಸಂಖ್ಯೆ ಅಧಿಕವಾಗಿದೆ. ಲಾಭದ ಅಂಶ ಕಡಿಮೆಯಿದ್ದರೂ ಬಹುತೇಕ ಮಂದಿ ಇದೇ ಕ್ಷೇತ್ರವನ್ನು ಆಯ್ಕೆ ಮಾಡಿಕೊಳ್ಳುವುದು ಗಮನಿಸಬೇಕಾದ ಅಂಶ ಎಂದು ಹೇಳಿದ್ದಾರೆ.

<><><>

ಮೈಸೂರಿನಲ್ಲಿ ಮಾದಕವಸ್ತುಗಳ ತಯಾರಿಕಾ ಘಟಕ ಪತ್ತೆ ಕುರಿತಂತೆ ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಅಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಮಾದಕದ್ರವ್ಯ, ಸಾಗಾಣೆ ತಡೆಗಟ್ಟುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದ್ದು, ಯುವಕರ ಭವಿಷ್ಯವನ್ನು ಹಾಳು ಮಾಡುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಅವರು ಆರೋಪಿಸಿದ್ದಾರೆ. ಈ ಕುರಿತಂತೆ ರಾಜ್ಯಾದ್ಯಂತ ಹೋರಾಟ ನಡೆಸುವ ಎಚ್ಚರಿಕೆ ನೀಡಿದ್ದಾರೆ. ಶೌರ್ಯ, ಸಾಹಸ, ದಕ್ಷತೆಗೆ ಹೆಸರುವಾಸಿಯಾಗಿದ್ದ ರಾಜ್ಯ ಪೊಲೀಸ್ ಇಲಾಖೆ ಸರ್ಕಾರದ ಅಸಮರ್ಥತೆಯಿಂದ ಹದಗೆಟ್ಟಿದೆ ಎಂದು ದೂರಿದ್ದಾರೆ.

<><><>

ಗ್ರಾಮ ಪಂಚಾಯಿತಿಗಳು  ಸುಸಜ್ಜಿತ ಕಟ್ಟಡ  ಹಾಗೂ ಮೂಲ ಸೌಕರ್ಯ ಹೊಂದುವುದರೊಂದಿಗೆ ತ್ವರಿತವಾಗಿ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವಂತಾಗಬೇಕು ಎಂದು  ಆಹಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ದೇವನಹಳ್ಳಿ ತಾಲೂಕು ಕಸಬಾ ಹೋಬಳಿ ಬಿದಲೂರು ಗ್ರಾಮ ಪಂಚಾಯತಿಯ ನೂತನ ಕಟ್ಟಡ ಲೋಕಾರ್ಪಣೆ ಮಾಡಿ ಮಾತನಾಡಿದ ಅವರು. ತಮ್ಮ ಕಾರ್ಯವೈಖರಿಗಳ ಮೂಲಕ ಗ್ರಾಮಪಂಚಾಯತಿಯನ್ನು ಮೊದಲನೇ ಸ್ಥಾನಕ್ಕೆ ಕೊಂಡಯ್ಯಬೇಕು. ಬಡವರನ್ನು ಗುರುತಿಸಿ ಅವರಿಗೆ ನಿವೇಶನ, ಒಳಚರಂಡಿ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡುವ ಕೆಲಸ ಮಾಡಬೇಕು ಎಂದು ಸಲಹೆ ನೀಡಿದ್ದಾರೆ.

<><><>

ಠಾಣೆಯ ವಶದಲ್ಲಿದ್ದ ವಾಹನ ಬಿಡುಗಡೆಗೆ ೪೦ ಸಾವಿರ ಲಂಚ ಪಡೆದ ಆರೋಪದ ಮೇರೆಗೆ ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಚೇತನ್ ಅವರನ್ನು ಲೋಕಾಯುಕ್ತ ಪೊಲೀಸರು

ಇಂದು ಬೆಳಗಿನ ಜಾವ ಬಂಧಿಸಿದ್ದಾರೆ. ವಾಹನ ಬಿಡುಗಡೆ ಮಾಡಲು ಸಬ್ ಇನ್ಸ್‍ಪೆಕ್ಟರ್ ಒಂದು ಲಕ್ಷಕ್ಕೆ ಬೇಡಿಕೆ ಇಟ್ಟಿದ್ದರು. ಇದರಲ್ಲಿ ೪೦ ಸಾವಿರ ಹಣವನ್ನು ಕ್ಯಾತ್ಸಂದ್ರ ಬಳಿಯ ಹೋಟೆಲ್ ಸಿಬ್ಬಂದಿಗೆ ನೀಡುವಂತೆ ವಾಹನ ಮಾಲೀಕರಿಗೆ ಚೇತನ್ ತಿಳಿಸಿದ್ದರು. ಈ ಕುರಿತು ವಾಹನ ಮಾಲೀಕರು ಲೋಕಾಯುಕ್ತ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಶುಕ್ರವಾರ ರಾತ್ರಿ ಕ್ಯಾತ್ಸಂದ್ರದ ಹೋಟೆಲ್ ಸಿಬ್ಬಂದಿ ಹಣ ಪಡೆಯುವಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಸಿಬ್ಬಂದಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಪಿಎಸ್‍ಐ ಚೇತನ್ ಬಗ್ಗೆ ಮಾಹಿತಿ ನೀಡಿದ್ದು, ಇಂದು ಬೆಳಗಿನ ಜಾವ ಲೋಕಾಯುಕ್ತ ಪೊಲೀಸರು ಚೇತನ್ ಅವರನ್ನು ಬಂಧಿಸಿದ್ದಾರೆ.

<><><><>

ಕೋಲಾರ ಜಿಲ್ಲೆಯ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಹಾಗೂ ಎಸ್‍ಎಸ್‍ಎಲ್‍ಸಿ ಫಲಿತಾಂಶದ ಪ್ರಮಾಣ ಹೆಚ್ಚಿಸುವ ನಿಟ್ಟಿನಲ್ಲಿ ಪ್ರತಿಯೊಂದು ಶಾಲೆಯೂ ಮೈಕ್ರೋ ಪ್ಲಾನಿಂಗ್ ರೂಪಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆ ಹಾಗೂ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಗುರುತಿಸುವ ಜೊತೆಗೆ ಅವರಲ್ಲಿನ ನಿರ್ದಿಷ್ಟ ಕಲಿಕಾ ಕೊರತೆಗಳನ್ನು ಪತ್ತೆಹಚ್ಚಿ ಪರಿಹಾರಾತ್ಮಕ ಬೋಧನೆ ನೀಡಬೇಕು. ಪ್ರತಿ ವಿದ್ಯಾರ್ಥಿಯೂ ಕನಿಷ್ಠ ಉತ್ತೀರ್ಣ ಅಂಕಗಳನ್ನು ಪಡೆಯುವಂತೆ ಆತ್ಮವಿಶ್ವಾಸ ತುಂಬಬೇಕು ಎಂದು ನಿರ್ದೇಶನ ನೀಡಿದ್ದಾರೆ. ಹೆಚ್ಚಿನ ಗಮನ ಅಗತ್ಯವಿರುವ ವಿದ್ಯಾರ್ಥಿಗಳನ್ನು ಶಿಕ್ಷಕರು ಹಾಗೂ ಅಧಿಕಾರಿಗಳು ದತ್ತು ಪಡೆದು ವಾರಕ್ಕೊಮ್ಮೆ ಪ್ರಗತಿ ಪರಿಶೀಲನೆ ನಡೆಸಬೇಕು. ಶೂನ್ಯ ಫಲಿತಾಂಶ ಸಾಧ್ಯತೆ ಇರುವ ಶಾಲೆಗಳ ಮೇಲೆ ವಿಶೇಷ ನಿಗಾ ವಹಿಸಬೇಕು ಎಂದು ತಿಳಿಸಿದ್ದಾರೆ. ಬಿಇಒಗಳು  ಶಾಲೆಗಳಿಗೆ ಭೇಟಿ ನೀಡಿ ಬೋಧನಾ ಗುಣಮಟ್ಟ ಪರಿಶೀಲಿಸಬೇಕು. ಫಲಿತಾಂಶ ಕುಸಿತಕ್ಕೆ ಸಂಬಂಧಪಟ್ಟ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಆರೋಗ್ಯ ಕೇಂದ್ರಗಳ ವ್ಯಾಪ್ತಿಯಲ್ಲಿ ನೈರ್ಮಲ್ಯ ಮತ್ತು ಶುಚಿತ್ವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಮರುಳಸಿದ್ದಾರಾಧ್ಯ ಎಚ್.ಜೆ. ನೇತೃತ್ವದಲ್ಲಿ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ರಾಷ್ಟ್ರೀಯ ಸ್ವಚ್ಛತಾ ದಿನದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಆಸ್ಪತ್ರೆಯ ಒಳಾಂಗಣ, ಕಾರಿಡಾರ್‍ಗಳು, ಕಟ್ಟಡದ ಹಿಂಭಾಗ, ಆಸ್ಪತ್ರೆ ಆವರಣ, ಮೆಡಿಕಲ್ ಕಾಲೇಜು ಸೇರಿದಂತೆ ವಿವಿಧ ಸ್ಥಳಗಳಲ್ಲಿ ಅಧಿಕಾರಿಗಳು, ವಿದ್ಯಾರ್ಥಿಗಳು, ವಕೀಲರು ಹಾಗೂ ಸ್ವಯಂಸೇವಕರು ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಂಡರು. ಈ ಶ್ರಮದಾನದಲ್ಲಿ ನ್ಯಾಯಾಂಗ ಇಲಾಖೆ ಸಿಬ್ಬಂದಿ, ಪೊಲೀಸ್ ಇಲಾಖೆ ಸಿಬ್ಬಂದಿ,  ವಕೀಲರು, ಆರೋಗ್ಯ ಇಲಾಖೆ ಸಿಬ್ಬಂದಿ, ಗೃಹ ರಕ್ಷಕ ದಳದ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಎನ್‍ಎಸ್‍ಎಸ್ ಘಟಕದ ಸ್ವಯಂಸೇವಕರು ಸೇರಿದಂತೆ ನೂರಾರು ಮಂದಿ ಕೈಜೋಡಿಸಿದರು.

<><><><>

ಶಿಕ್ಷಣ ಇಲಾಖೆ, ನ್ಯಾಯಾಂಗ ಇಲಾಖೆ, ಸಾರಿಗೆ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ ಬೆಳಗಾವಿಯಲ್ಲಿ ಇಂದು ರಸ್ತೆ ಸುರಕ್ಷತೆ ಜಾಗೃತಿ ಅಭಿಯಾನ ನಡೆಯಿತು. ಚನ್ನಮ್ಮ ವೃತ್ತದಿಂದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯವರೆಗೆ ರಸ್ತೆ ಸುರಕ್ಷತೆ ಕಾಲ್ನಡಿಗೆ ಜಾಥಾ ನಡೆಸಲಾಯಿತು. ಈ ವೇಳೆ ಮಾತನಾಡಿದ ಬೆಳಗಾವಿ ಸಾರಿಗೆ ಇಲಾಖೆಯ ಆಯುಕ್ತ ಸಿದ್ಧಪ್ಪ ಕಲ್ಲೇರ ರಸ್ತೆ ಅಪಘಾತದಲ್ಲಿ ೧೮ ರಿಂದ ೩೦ ವರ್ಷ ವಯೋಮಾನದ ಯುವಕರು ಹೆಚ್ಚಿಗೆ ಸಾವಿಗೀಡಾಗುತ್ತಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

**ಧ್ವನಿ : ಸಿದ್ಧಪ್ಪ ಕಲ್ಲೇರ (೩೪ ಸೆಕೆಂಡ್‌ಗಳು)**

<><><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದ ಡಾ. ಅನಿಬೆಸೆಂಟ್ ಪಾರ್ಕ್ ನಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್, ರಾಷ್ಟ್ರಿಯ ವಿಪತ್ತು ನಿರ್ವಹಣಾ ಸಂಸ್ಥೆ, ರಾಜ್ಯ ವಿಪತ್ತು ನಿರ್ವಹಣಾ ಸಂಸ್ಥೆ ವತಿಯಿಂದ ಯುವ ಆಪದ್ ಮಿತ್ರ ನಿರ್ವಹಣೆ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ರಾಜ್ಯ ಮೈ ಭಾರತ್‌ನ ಜಂಟಿ ನಿರ್ದೇಶಕ ಅಶೋಕ್ ಕುಮಾರ್ ದೇಸಾಯಿ ಮಾತನಾಡಿ, ಯಾವುದೇ ರೀತಿಯ ವಿಪತ್ತು ಸಂಭವಿಸಿದ ಸಂದರ್ಭದಲ್ಲಿ ಶೀಘ್ರವಾಗಿ ಸ್ಪಂದಿಸಬೇಕು ಎಂದು ಹೇಳಿದ್ದಾರೆ. ನೈಸರ್ಗಿಕ ವಿಪತ್ತು ತಡೆಯಲು ಸಾಧ್ಯವಿಲ್ಲ. ಆದರೆ ಮುನ್ನೆಚ್ಚರಿಕೆ ಹಾಗೂ ಸಕಾಲದಲ್ಲಿ ನಮ್ಮ ರಕ್ಷಣೆಗೆ ಕೈಗೊಳ್ಳಬಹುದಾದ ಕ್ರಮಗಳಿಂದ ಅನಾಹುತದಿಂದ ಪಾರಾಗಬಹುದು ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>